All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

22.06.2026 19.35 hrs

---

ಮುಖ್ಯಾಂಶಗಳು

- ಭಾರತದ ಆತಿಥ್ಯದಲ್ಲಿ ನವದೆಹಲಿಯಲ್ಲಿ ಬ್ರಿಕ್ಸ್ ರಾಷ್ಟ್ರೀಯ ಭದ್ರತಾ ಸಲಹೆಗಾರರ ಸಭೆ ಆರಂಭ
- ಲಖನೌದ ಮೂರು ಅಂತಸ್ತಿನ ಕಟ್ಟಡದಲ್ಲಿ ಭಾರೀ ಅಗ್ನಿ ದುರಂತ; ೧೪ ವಿದ್ಯಾರ್ಥಿಗಳ ಸಾವು, ರಾಷ್ಟ್ರಪತಿ, ಉಪರಾಷ್ಟ್ರಪತಿ ಪ್ರಧಾನಿ ಅವರಿಂದ ಸಂತಾಪ
- ಜಗತ್ತಿಗೆ ಭಾರತ ಅಪ್ರತಿಮ ಆರ್ಥಿಕ ಅವಕಾಶಗಳನ್ನು ಒದಗಿಸುತ್ತಿದೆ: ಕೇಂದ್ರ ಸಚಿವ ಪಿಯೂಷ್ ಗೋಯಲ್
- ಗಲ್ಫ ರಾಷ್ಟ್ರಗಳ ಸಿಬಿಎಸ್‌ಇ ಖಾಸಗಿ ವಿದ್ಯಾರ್ಥಿಗಳಿಗೆ ಹೊಸ ನೀತಿ: ಅರ್ಜಿ ವಿಲೇವಾರಿ ಮಾಡಿದ ಸುಪ್ರೀಂ ಕೋರ್ಟ್
- ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿ ಇಂದು ಅರ್ಜೆಂಟಿನಾ-ಆಸ್ಟ್ರಿಯಾ ಮುಖಾಮುಖಿ

---

ಭಾರತದ ಆತಿಥ್ಯದಲ್ಲಿ ಬ್ರಿಕ್ಸ್ ರಾಷ್ಟ್ರಗಳ ಭದ್ರತಾ ಸಲಹೆಗಾರರ ಎರಡು ದಿನಗಳ ಮಹತ್ವದ ಸಭೆಯು ಇಂದು ನವದೆಹಲಿಯಲ್ಲಿ ಆರಂಭವಾಗಿದೆ. ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಈ ಸಭೆಯಲ್ಲಿ ಒಕ್ಕೂಟದ ಎಲ್ಲಾ ೧೧ ಸದಸ್ಯ ರಾಷ್ಟ್ರಗಳಾದ ಭಾರತ, ಬ್ರೆಜಿಲ್, ಚೀನಾ, ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ, ಇರಾನ್, ರಷ್ಯಾ, ಸೌದಿ ಅರೇಬಿಯಾ, ದಕ್ಷಿಣ ಆಫ್ರಿಕಾ ಮತ್ತು ಯುಎಇ ದೇಶಗಳ ಭದ್ರತಾ ಸಲಹೆಗಾರರು ಪಾಲ್ಗೊಂಡಿದ್ದಾರೆ.

'ಜಗತ್ತು ಇಂದು ಎದುರಿಸುತ್ತಿರುವ ಸಾಂಪ್ರದಾಯಿಕವಲ್ಲದ ಭದ್ರತಾ ಸವಾಲುಗಳು' ಎಂಬ ವಿಷಯದ ಅಡಿಯಲ್ಲಿ ಸಭೆ ನಡೆಯುತ್ತಿದ್ದು, ವೇಗವಾಗಿ ಬದಲಾಗುತ್ತಿರುವ ಭದ್ರತಾ ಬೆದರಿಕೆಗಳು ಹಾಗೂ ನವೀನ ತಂತ್ರಜ್ಞಾನಗಳಿಂದ ಉದ್ಭವಿಸುತ್ತಿರುವ ಭದ್ರತಾ ಅಪಾಯಗಳ ಕುರಿತು ಪ್ರಮುಖವಾಗಿ ಚರ್ಚಿಸಲಾಗುತ್ತಿದೆ.

ಇದರ ಜೊತೆಗೆ ಸೈಬರ್ ಭದ್ರತೆ, ಡಿಜಿಟಲ್ ದೋಷಗಳು ಮತ್ತು ಕೃತಕ ಬುದ್ಧಿಮತ್ತೆ ಆಧಾರಿತ ಬೆದರಿಕೆಗಳ ಬಗ್ಗೆಯೂ ಪ್ರತಿನಿಧಿಗಳು ಸುದೀರ್ಘ ಪರಾಮರ್ಶೆ ನಡೆಸುತ್ತಿದ್ದಾರೆ. ಇತ್ತೀಚೆಗೆ

ನಡೆದಿದ್ದ ಭಯೋತ್ಪಾದನೆ ನಿಗ್ರಹ ಮತ್ತು ಮಾಹಿತಿ ತಂತ್ರಜ್ಞಾನ ಬಳಕೆ ಸುರಕ್ಷತೆಗೆ ಸಂಬಂಧಿಸಿದ ಬ್ರಿಕ್ಸ್ ಜಂಟಿ ಕಾರ್ಯಪಡೆಗಳ ಸಭೆಯ ನಿರ್ಣಯಗಳನ್ನು ಇಲ್ಲಿ ಪರಿಶೀಲಿಸಲಾಗುತ್ತಿದೆ.

ಈ ಸಭೆಯ ಹಿನ್ನೆಲೆಯಲ್ಲಿ ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಇರಾನ್‌ನ ರಾಷ್ಟ್ರೀಯ ಭದ್ರತಾ ಮಂಡಳಿಯ ರಕ್ಷಣಾ ವ್ಯವಹಾರಗಳ ಇಲಾಖೆಯ ಉಪಕಾರ್ಯದರ್ಶಿ ಘಾದಿರ್ ನೆಝಾಮಿ ಪೋರ್ ಅವರನ್ನು ಭೇಟಿಯಾದರು. ಈ ವೇಳೆ, ಪಶ್ಚಿಮ ಏಷ್ಯದ ಪ್ರಸ್ತುತ ಪರಿಸ್ಥಿತಿ ಕುರಿತು ಪರಾಮರ್ಶಿಸಲಾಗಿದೆ.

---

ಉತ್ತರಪ್ರದೇಶದ ಲಕ್ನೋದ ಅಲಿಗಂಜ್‌ನ ಪುರಾನಿಯಾ ಪ್ರದೇಶದಲ್ಲಿರುವ ಮೂರು ಅಂತಸ್ತಿನ ಕಟ್ಟಡವೊಂದರಲ್ಲಿ ಇಂದು ಭೀಕರ ಅಗ್ನಿ ದುರಂತ ಸಂಭವಿಸಿದ್ದು, ಕಟ್ಟಡದೊಳಗಿನ ಕೋಚಿಂಗ್ ಸೆಂಟರ್‌ನಲ್ಲಿದ್ದ ಕನಿಷ್ಠ ೧೪ ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ ಎಂದು ಉತ್ತರಪ್ರದೇಶ ಉಪಮುಖ್ಯಮಂತ್ರಿ ಬ್ರಜೇಶ್ ಪಾಠಕ್ ತಿಳಿಸಿದ್ದಾರೆ.

ಘಟನೆ ಹಿನ್ನೆಲೆಯಲ್ಲಿ ಅಲಿಗಢ ಪ್ರವಾಸದಲ್ಲಿದ್ದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತಮ್ಮ ಪ್ರವಾಸವನ್ನು ಮೊಟಕುಗೊಳಿಸಿ ಲಕ್ನೋಗೆ ಮರಳಿದ್ದಾರೆ. ಮೃತರ ಕುಟುಂಬಗಳಿಗೆ ತೀವ್ರ ಸಂತಾಪ ಸೂಚಿಸಿರುವ ಮುಖ್ಯಮಂತ್ರಿಗಳು, ದುರಂತದಲ್ಲಿ ಪ್ರಾಣಹಾನಿಯಾಗಿರುವುದು ಅತ್ಯಂತ ದುಃಖಕರವಾಗಿದೆ ಎಂದು ವಿಷಾದಿಸಿದ್ದಾರೆ. ಮೃತರ ವಯಸ್ಸು ೧೦ ರಿಂದ ೨೪ ವರ್ಷಗಳ ಆಸುಪಾಸಿನಲ್ಲಿದೆ ಎಂದು ತಿಳಿದುಬಂದಿದೆ.

ಕಟ್ಟಡದ ಒಳಗಿದ್ದ ಕೋಚಿಂಗ್ ಸೆಂಟರ್‌ನಲ್ಲಿ ಮಧ್ಯಾಹ್ನ ಬೆಂಕಿ ಕಾಣಿಸಿಕೊಂಡಿದ್ದು, ಕ್ಷಣಾರ್ಧದಲ್ಲಿ ಇಡೀ ಆವರಣ ದಟ್ಟವಾದ ಹೊಗೆಯಿಂದ ಆವೃತವಾಗಿ ವಿದ್ಯಾರ್ಥಿಗಳಲ್ಲಿ ಆತಂಕ ಮೂಡಿಸಿದೆ. ಜ್ವಾಲೆ ಮತ್ತು ಹೊಗೆಯಿಂದಾಗಿ ಹೊರಹೋಗುವ ಮಾರ್ಗಗಳು ಬಂದ್ ಆಗಿದ್ದರಿಂದ, ಪ್ರಾಣ ಉಳಿಸಿಕೊಳ್ಳಲು ಕೆಲವು ವಿದ್ಯಾರ್ಥಿಗಳು ಮೇಲಿನ ಮಹಡಿ ಹಾಗೂ ಟೆರೇಸ್‌ನಿಂದ ಕೆಳಗೆ ಜಿಗಿದು ಗಂಭೀರವಾಗಿ ಗಾಯಗೊಂಡಿದ್ದಾರೆ.

ಸ್ಥಳೀಯ ನಿವಾಸಿಗಳ ನೆರವಿನೊಂದಿಗೆ ಪಕ್ಕದ ಕಟ್ಟಡದ ಮೇಲ್ಛಾವಣಿಯ ಮೂಲಕ ಜನರನ್ನು ಸ್ಥಳಾಂತರಿಸಲಾಗುತ್ತಿದ್ದು, ಸಿಕ್ಕಿಬಿದ್ದವರನ್ನು ರಕ್ಷಿಸಲು ಅಗ್ನಿಶಾಮಕ ಸಿಬ್ಬಂದಿ, ಗೋಡೆಗಳನ್ನು ಒಡೆಯುತ್ತಿದ್ದಾರೆ.

ಗಾಯಾಳುಗಳನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ಜಿಲ್ಲಾಧಿಕಾರಿ ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳು ರಕ್ಷಣಾ ಕಾರ್ಯಾಚರಣೆಯ ಉಸ್ತುವಾರಿ ವಹಿಸಿದ್ದಾರೆ. ಸದ್ಯಕ್ಕೆ ಅಗ್ನಿ ಅವಘಡಕ್ಕೆ ನಿಖರ ಕಾರಣ ಏನೆಂಬುದು ಇನ್ನು ಪತ್ತೆಯಾಗಿಲ್ಲ.

ಘಟನೆ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ.

ಪ್ರಧಾನಮಂತ್ರಿ ಪರಿಹಾರ ನಿಧಿಯಿಂದ ಸಾವನ್ನಪ್ಪಿದವರ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಘೋಷಿಸಿದ್ದಾರೆ.

---

ವಿಶ್ವಕ್ಕೆ ಇಂದು ಭಾರತವು ವಿಶಿಷ್ಟ ಹಾಗೂ ಅಪ್ರತಿಮ ಆರ್ಥಿಕ ಅವಕಾಶಗಳನ್ನು ಒದಗಿಸುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ಖಾಸಗಿ ಸುದ್ದಿಸಂಸ್ಥೆಯೊಂದರ ಸಂದರ್ಶನದಲ್ಲಿ ಮಾತನಾಡಿದ ಅವರು, ದೇಶವನ್ನು ಅತ್ಯಂತ ವಿಶ್ವಾಸಾರ್ಹ ಜಾಗತಿಕ ಆರ್ಥಿಕ ಪಾಲುದಾರನನ್ನಾಗಿ ರೂಪಿಸಬೇಕೆಂಬ ಪ್ರಧಾನಿ ನರೇಂದ್ರ ಮೋದಿ ಅವರ ದೃಷ್ಟಿಕೋನವನ್ನು ಹಂಚಿಕೊಂಡರು.

ಕೇಂದ್ರ ಸರ್ಕಾರದ ಬಲಿಷ್ಠ ಆರ್ಥಿಕ ಅಡಿಪಾಯ, ಸ್ಥಿರ ನೀತಿಗಳು ಮತ್ತು ಪ್ರಗತಿಪರ ಸುಧಾರಣೆಗಳಿಂದಾಗಿ ಜಾಗತಿಕ ಉದ್ಯಮಗಳು ಭಾರತದತ್ತ ಮುಖ ಮಾಡುತ್ತಿದ್ದು, ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತದ ಪಾತ್ರ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಈ ಆರ್ಥಿಕ ಬೆಳವಣಿಗೆಯು ಹೂಡಿಕೆದಾರರು, ವರ್ತಕರು ಮತ್ತು ರಫ್ತುದಾರರಿಗೆ ಅಭೂತಪೂರ್ವ ಅವಕಾಶಗಳನ್ನು ಸೃಷ್ಟಿಸಿದೆ ಎಂದು ಸಚಿವರು ತಿಳಿಸಿದರು.

ಕೇಂದ್ರ ಸರ್ಕಾರವು ನಿರಂತರವಾಗಿ 'ರಾಷ್ಟ್ರ ಮೊದಲು' ನೀತಿಯನ್ನು ಅಳವಡಿಸಿಕೊಂಡಿದ್ದು, ಪ್ರತಿಯೊಂದು ಒಪ್ಪಂದವೂ ದೇಶದ ಆರ್ಥಿಕ ಪ್ರಗತಿ ಮತ್ತು ಉದ್ಯೋಗ ಸೃಷ್ಟಿಗೆ ಕೊಡುಗೆ ನೀಡುವಂತೆ ನೋಡಿಕೊಳ್ಳಲಾಗುತ್ತಿದೆ ಎಂದರು.

---

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಇಂದು ಮಂಗೋಲಿಯಾದ ಉಲಾನ್‌ಬಾಟರ್‌ನಲ್ಲಿ ಮಂಗೋಲಿಯಾ ಅಧ್ಯಕ್ಷ ಖುರೇಲ್ ಸುಖ್ ಉಖ್ನಾ ಅವರನ್ನು ಭೇಟಿಯಾದರು.

ಸಚಿವ ಡಾ. ಎಸ್. ಜೈಶಂಕರ್ ಮಂಗೋಲಿಯಾ ವಿದೇಶಾಂಗ ಸಚಿವೆ ಬ್ಯಾಟ್‌ಸೆಟ್‌ಸೆಗ್ ಬಾಟ್‌ಮುಂಖ್ ಅವರನ್ನು ಸಹ ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

ಉಭಯ ನಾಯಕರು ಅಭಿವೃದ್ಧಿ ಯೋಜನೆಗಳು, ಸಾಮರ್ಥ್ಯ ವೃದ್ಧಿ, ಸಂಸ್ಕೃತಿ, ಶಿಕ್ಷಣ, ಭದ್ರತೆ ಹಾಗೂ ಬಹುಪಕ್ಷೀಯ ವೇದಿಕೆಗಳಲ್ಲಿ ದ್ವಿಪಕ್ಷೀಯ ಸಹಕಾರದ ಪ್ರಗತಿಯನ್ನು ಪರಾಮರ್ಶಿಸಿದ್ದಾರೆ. ಇದರೊಂದಿಗೆ ಗಣಿಗಾರಿಕೆ, ಶುದ್ಧ ಇಂಧನ ಹಾಗೂ ಕೃಷಿ ಸಂಸ್ಕರಣಾ ವಲಯಗಳಲ್ಲಿರುವ ಆರ್ಥಿಕ ಅವಕಾಶಗಳ ಕುರಿತು ಉಭಯ ನಾಯಕರು ಸುದೀರ್ಘ ಚರ್ಚೆ ನಡೆಸಿದ್ದಾರೆ.

---

ಯುದ್ಧದ ಉದ್ವಿಗ್ನತೆಯಿಂದಾಗಿ ಪಶ್ಚಿಮ ಏಷ್ಯಾ ರಾಷ್ಟ್ರಗಳಲ್ಲಿ ರದ್ದಾಗಿದ್ದ ಸಿಬಿಎಸ್‌ಇ ೧೨ನೇ ತರಗತಿ ಪರೀಕ್ಷೆಯ ಖಾಸಗಿ ವಿದ್ಯಾರ್ಥಿಗಳ ಮೌಲ್ಯಮಾಪನಕ್ಕಾಗಿ ಕೇಂದ್ರ ಸರ್ಕಾರ ಹೊಸ ರಾಷ್ಟ್ರೀಯ ನೀತಿಯನ್ನು ಪ್ರಕಟಿಸಿದೆ. ಈ ಹಿನ್ನೆಲೆಯಲ್ಲಿ, ಸೌದಿ ಅರೇಬಿಯಾದ ವಿದ್ಯಾರ್ಥಿಯೊಬ್ಬರು ಸಲ್ಲಿಕೆ ಮಾಡಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಿಲೇವಾರಿ ಮಾಡಿದೆ.

ಜೂನ್ ೨೧ ರಂದು ಜಾರಿಗೆ ಬಂದ ಈ ನೀತಿಯನ್ನು ದಾಖಲಿಸಿಕೊಂಡ ನ್ಯಾಯಮೂರ್ತಿಗಳಾದ ಎಸ್.ವಿ.ಎನ್. ಭಟ್ಟಿ ಮತ್ತು ವಿಪುಲ್ ಎಂ. ಪಾಂಚೋಲಿ ಅವರ ಪೀಠವು, ಅರ್ಜಿದಾರ ವಿದ್ಯಾರ್ಥಿಯ ಫಲಿತಾಂಶವನ್ನು ಈಗಾಗಲೇ ಪ್ರಕಟಿಸಿ ಇಮೇಲ್ ಮೂಲಕ ತಿಳಿಸಲಾಗಿದೆ ಎಂಬ ಸರ್ಕಾರದ ಹೇಳಿಕೆಯನ್ನು ಪುರಸ್ಕರಿಸಿತು.

ಖಾಸಗಿ ವಿದ್ಯಾರ್ಥಿಗಳಿಗೆ ಶಾಲಾ ಆಂತರಿಕ ಅಂಕಗಳ ದಾಖಲೆ ಇಲ್ಲದ ಕಾರಣ ಕೇಂದ್ರ ಸರ್ಕಾರ ಈ ಹೊಸ ಸೂತ್ರವನ್ನು ಸಿದ್ಧಪಡಿಸಿದೆ. ಇದರ ಪ್ರಕಾರ, ಪರೀಕ್ಷೆ ರದ್ದಾದ ವಿಷಯಗಳಿಗೆ ವಿದ್ಯಾರ್ಥಿಯ ೧೦ನೇ ತರಗತಿಯ ಬೋರ್ಡ್ ಪರೀಕ್ಷೆಯ ಥಿಯರಿ ಅಂಕಗಳಿಗೆ ಶೇಕಡಾ ೪೦ ರಷ್ಟು ಮತ್ತು ೧೨ನೇ ತರಗತಿಯ ಬೋರ್ಡ್ ಪರೀಕ್ಷೆಯ ಥಿಯರಿ ಅಂಕಗಳಿಗೆ ಶೇಕಡಾ ೬೦ ರಷ್ಟು ಆದ್ಯತೆ ನೀಡಿ ಫಲಿತಾಂಶ ನಿರ್ಧರಿಸಲಾಗುತ್ತದೆ. ಈ ಹೊಸ ಸೂತ್ರದಡಿ ಅರ್ಜಿದಾರರ ಫಲಿತಾಂಶ ಉತ್ತಮವಾಗಿದ್ದು, ಇದನ್ನು ಡಿಜಿಲಾಕರ್‌ನಲ್ಲೂ ಅಪ್‌ಡೇಟ್ ಮಾಡಲಾಗುವುದು ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ತಿಳಿಸಿದರು. ಅಂಕಗಳಿಂದ ತೃಪ್ತರಾಗದ ವಿದ್ಯಾರ್ಥಿಗಳಿಗೆ ಮುಂದಿನ ನಿಯಮಿತ ಪರೀಕ್ಷೆಗೆ ಹಾಜರಾಗುವ ಅವಕಾಶವನ್ನೂ ಈ ನೀತಿಯಡಿ ಕಲ್ಪಿಸಲಾಗಿದೆ.

---

ಕೇಂದ್ರ ಕೈಗಾರಿಕಾ ಭದ್ರತಾ ಪಡೆಯು -ಸಿಐಎಸ್‌ಎಫ್ ರಾಷ್ಟ್ರದ ಪ್ರಗತಿಯನ್ನು ಸುರಕ್ಷಿತವಾಗಿಡುವ ಮೂಲಕ ದೇಶದ ಆರ್ಥಿಕ ಸೈನಿಕರಂತೆ ಕಾರ್ಯನಿರ್ವಹಿಸುತ್ತಿದೆ ಎಂದು ಕೇಂದ್ರ ಗೃಹ ವ್ಯವಹಾರಗಳ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಶ್ಲಾಘಿಸಿದ್ದಾರೆ.

ದೆಹಲಿಯಲ್ಲಿ ಸಿಐಎಸ್‌ಎಫ್‌ನ ನೂತನ ಪ್ರಧಾನ ಕಚೇರಿ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಸಿಬ್ಬಂದಿಯ ಮಾನಸಿಕ ಆರೋಗ್ಯ ಕಾಪಾಡುವ 'ಪ್ರಾಜೆಕ್ಟ್ ಮನ್' ಉಪಕ್ರಮವನ್ನು ಪ್ರಶಂಸಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ 'ಆಯುಷ್ಮಾನ್ ಸಿಎಪಿಎಫ್' ಸೇರಿದಂತೆ ಪಡೆಗಳ ಕಲ್ಯಾಣಕ್ಕಾಗಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.

---

ನವದೆಹಲಿಯಲ್ಲಿಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಸ್ರೇಲ್ ರಕ್ಷಣಾ ಸಚಿವಾಲಯದ ಮಹಾನಿರ್ದೇಶಕ ನಿವೃತ್ತ ಮೇಜರ್ ಜನರಲ್ ಅಮೀರ್ ಬರಾಮ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ಈ ಕುರಿತ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ರಕ್ಷಣಾ ಸಚಿವಾಲಯ ಭೇಟಿಯ ವೇಳೆ, ಭಾರತ-ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯಡಿ ಉಭಯ ರಾಷ್ಟ್ರಗಳ ರಕ್ಷಣಾ ಸಹಕಾರವನ್ನು ವಿಸ್ತರಿಸಲು ಇಸ್ರೇಲ್ ಹೊಂದಿರುವ ಬದ್ಧತೆಯ ಕುರಿತು ನಿವೃತ್ತ ಮೇಜರ್ ಜನರಲ್ ಅಮೀರ್ ಬರಾಮ್, ರಕ್ಷಣಾ ಸಚಿವರಿಗೆ ಮಾಹಿತಿ ನೀಡಿದ್ದಾರೆ.

---

ಟೆಕ್ಸಾಸ್‌ನ ಅರ್ಲಿಂಗ್‌ಟನ್‌ನ ಡೆಲ್ಲಾಸ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಜೆ ಗುಂಪಿನ ಪಂದ್ಯದಲ್ಲಿ ಅರ್ಜೆಂಟಿನಾ ಮತ್ತು ಆಸ್ಟ್ರಿಯಾ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯ ಭಾರತೀಯ ಕಾಲಮಾನ ೧೦.೩೦ಕ್ಕೆ ಆರಂಭವಾಗಲಿದೆ.

ಇಂದು ಭಾರತೀಯ ಕಾಲಮಾನ ಮಧ್ಯರಾತ್ರಿ ೨.೩೦ಕ್ಕೆ ಫಿಲೆಡೆಲ್‌ಫಿಯಾದಲ್ಲಿ ನಡೆಯಲಿರುವ ಐ ಗುಂಪಿನ ಪಂದ್ಯದಲ್ಲಿ ಫ್ರಾನ್ಸ್ ಮತ್ತು ಇರಾಕ್ ತಂಡಗಳು ಮುಖಾಮುಖಿಯಾಗಲಿವೆ.

---

ಶಿವಸೇನೆ ಉದ್ಧವ್‌ಠಾಕ್ರೆ ಬಣದಿಂದ ೬ ಲೋಕಸಭಾ ಸಂಸದರು ಇಂದು ಶಿವಸೇನೆಗೆ ಸೇರ್ಪಡೆಯಾಗಿದ್ದಾರೆ ಎಂದು ಶಿವಸೇನೆಯ ನಾಯಕ ಹಾಗೂ ಮಹರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ ಶಿಂಧೆ ಪ್ರಕಟಿಸಿದ್ದಾರೆ.

ಮುಂಬೈನಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಸಂಸದರಾದ ಸಂಜಯ್ ದಿನಾ ಪಾಟೀಲ್, ಸಂಜಯ್ ದೇಶ್‌ಮುಖ್, ಸಂಜಯ್ ಜಾಧವ್, ಭಾವು ಸಾಹೇಬ್ ವಾಕ್‌ಚೌರೆ, ನಾಗೇಶ್ ಪಾಟೀಲ್ ಅಶ್ಟಿಕರ್ ಮತ್ತು ಓಂ ಪ್ರಕಾಶ್ ರಾಜೆ ನಿಬಾಳ್ಕಾರ್ ಅವರನ್ನು ಪಕ್ಷಕ್ಕೆ ಅಧಿಕೃತವಾಗಿ ಸ್ವಾಗತಿಸಿದರು.

---

ತಮ್ಮದೇ ಪಕ್ಷದಿಂದ ತೀವ್ರಗೊಳ್ಳುತ್ತಿದ್ದ ಆಂತರಿಕ ಒತ್ತಡಕ್ಕೆ ಮಣಿದಿರುವ ಯುನೈಟೆಡ್ ಕಿಂಗ್‌ಡಮ್- ಯುಕೆಯ ಪ್ರಧಾನಿ ಹಾಗೂ ಲೇಬರ್ ಪಕ್ಷದ ನಾಯಕ ಕೀರ್ ಸ್ಟಾರ್ಮರ್ ಅವರು ಇಂದು ತಮ್ಮ ಪ್ರಧಾನಮಂತ್ರಿ ಹುದ್ದೆಗೆ ಹಾಗೂ ಪಕ್ಷದ ನಾಯಕತ್ವಕ್ಕೆ ರಾಜೀನಾಮೆ ಘೋಷಿಸಿದ್ದಾರೆ.

ಇದರೊಂದಿಗೆ ಅವರ ಅಧಿಕಾರಾವಧಿ ಅಂತ್ಯಗೊಂಡಿದೆ. ಪ್ರಧಾನಿಮಂತ್ರಿಗಳ ನಿವಾಸದಿಂದ ತಮ್ಮ ಪತ್ನಿಯೊಂದಿಗೆ ಹೊರಬಂದ ಕೀರ್ ಸ್ಟಾರ್ಮರ್, ಬೆಂಬಲಿಗರ ಕರತಾಡನದ ನಡುವೆ ತಮ್ಮ ರಾಜೀನಾಮೆ ಹೇಳಿಕೆಯನ್ನು ಬಿಡುಗಡೆ ಮಾಡಿದರು.

---

ಈ ವರ್ಷದ ಜನವರಿಯಲ್ಲಿ ಬಿಡುಗಡೆಯಾದಾಗಿನಿಂದ 'ಆಧಾರ್ ಆಪ್' ೩೧ ಮಿಲಿಯನ್‌ಗೂ ಹೆಚ್ಚು ಡೌನ್‌ಲೋಡ್‌ಗಳನ್ನು ಕಾಣುವ ಮೂಲಕ ದಾಖಲೆ ಬರೆದಿದೆ. ಆಪ್‌ನ ಈ ಹೆಚ್ಚುತ್ತಿರುವ ಬಳಕೆಯು, ನಾಗರಿಕರ ಬೆರಳ ತುದಿಗೆ ಸೇವೆಗಳನ್ನು ತಲುಪಿಸುವಲ್ಲಿ ಅದರ ಮೇಲಿರುವ ಜನರ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ ಎಂದು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ತಿಳಿಸಿದೆ.

__________ ಮುಕ್ತಾಯ __________